ಸಮಸ್ತ ಕನ್ನಡಿಗರ ಏಕೈಕ ಸಂಜೆ ದಿನಪತ್ರಿಕೆ

ಈ ಸಂಜೆ

**Friday 16th June 2023, Page No.7**

**RVCE: 8th Mile Techno Cultural Fest 2023**

# ಕನ್ನಡ ಉಳಿವಿಗೆ ಪ್ರತಿಯೊಬ್ಬರೂ ಸಂಕಲ್ಪ ಮಾಡಿ



**ಕೆಂಗೇರಿ, ಜೂ.16-** ಸಾವಿರಾರು ವರ್ಷಗಳ ಇತಿಹಾಸವಿರುವ ಕನ್ನಡ ಭಾಷಾ ಬೆಳವಣಿಗೆಗೆ ಹಲವಾರು ಮಹನೀಯರು ಕೊಡುಗೆ ನೀಡಿದ್ದಾರೆ, ಭಾಷೆಯನ್ನು ಉಳಿಸಿ ಬೆಳೆಸಲು ನಾಡಿನ ಪ್ರತಿಯೊಬ್ಬರು ದೃಢ ಸಂಕಲ್ಪ ಮಾಡಬೇಕಿದೆ ಎಂದು ಸಾಹಿತಿ ಹಿರೇಮಗಳೂರು ಕಣ್ಣನ್ ಕರೆ ನೀಡಿದರು.

ಬೆಂಗಳೂರು-ಮೈಸೂರು ಮುಖ್ಯ ರಸ್ತೆಯ ಆರ್‌ವಿ ತಾಂತ್ರಿಕ ಮಹಾ ವಿದ್ಯಾಲಯದಲ್ಲಿ ಆವರಣದಲ್ಲಿ 8 ನೇ ಮೈಲ್ ಟೆಕ್ನೋ ಕಲ್ಚರಲ್ ಫೆಸ್ಟ್ 2023 ಮತ್ತು ಕರ್ನಾಟಕ 2023 ಕನ್ನಡ ಹಬ್ಬಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಳೆದ 50 ವರ್ಷಗಳ ಹಿಂದೆ ಕನ್ನಡ ಸಂಘವನ್ನು ಆರಂಭಿಸಿ ಕನ್ನಡ ಪರ ಚಟುವಟಿಕೆ ನಡೆಸುವ ಮೂಲಕ ಕನ್ನಡ ಭಾಷಾ ಬೆಳವಣಿಗೆಗೆ ಕೊಡುಗೆ ನೀಡಿ ಸುವರ್ಣ ಮಹೋತ್ಸವ ಆಚರಿಸುತ್ತಿರುವ ಕನ್ನಡ ಸಂಘದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ತಾಂತ್ರಿಕ ವಿದ್ಯಾಲಯವಾದರೂ ಕನ್ನಡದ ಬಗ್ಗೆ ಕಳಕಳಿ ವ್ಯಕ್ತಪಡಿಸಿ ಕನ್ನಡ ಪರ ವಾತಾವರಣ ನಿರ್ಮಾಣ ಮಾಡುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ. ನಮ್ಮ ಪೂರ್ವಜರು ಕನ್ನಡ ಸಾಹಿತ್ಯದಲ್ಲಿ ಗಣಿತ, ವಿಜ್ಞಾನ, ಗಾದೆ, ಒಗಟುಗಳ ಮೂಲಕ ಜೀವನ ಮೌಲ್ಯಗಳನ್ನು ಸಾರಿ ಜ್ಞಾನದ ಭಂಡಾರವನ್ನು ಹೆಚ್ಚಿಸಿಕೊಂಡು ಸಾಹಿತ್ಯ,ಕಲೆ, ಸಂಸ್ಕೃತಿ ಪರಂಪರೆ ಮೂಲಕ ಕನ್ನಡ ಭಾಷೆಯನ್ನು ಶ್ರೀಮಂತ ಗೊಳಿಸಿದ್ದಾರೆ ಎಂದರು.

ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಅಧ್ಯಕ್ಷ ಡಾ.ಎಂಪಿ ಶ್ಯಾಮ್ ಮಾತನಾಡಿ, ಕಾಲೇಜಿನಲ್ಲಿ ಗುಣಮಟ್ಟದ ಶಿಕ್ಷಣದೊಂದಿಗೆ ಕಲೆ, ಸಾಹಿತ್ಯ, ಸಂಸ್ಕೃತಿ ಉತ್ತಮ ವಿಚಾರಧಾರೆಗಳತ್ತ ಒಲವು ಮೂಡಿಸಿಕೊಳ್ಳುವ ವಾತಾವರಣ ನಿರ್ಮಾಣ ಮಾಡಲು ದೃಢ ಹೆಜ್ಜೆ ಇಟ್ಟು ಕಾರ್ಯನಿರ್ವಹಿಸಲಾಗುತ್ತಿದೆ ಎಂದರು.

ವಿದ್ಯಾರ್ಥಿಗಳಲ್ಲಿ ಅಡಗಿರುವ ಸುಪ್ತ ಪ್ರತಿಭೆಗೆ ಪ್ರೋತ್ಸಾಹ ನೀಡಿ ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರತಿಭೆಯನ್ನು ಅನಾವರಣಗೊಳಿಸಲು ಎಲ್ಲ ರೀತಿಯ ಸಹಕಾರ ನೀಡಲಾಗುತ್ತಿದೆ ಎಂದು ತಿಳಿಸಿದರು.

ಕನ್ನಡ ಸಂಘದ ಮೂಲಕ ನಿರಂತರ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಂಡು ಕನ್ನಡ ಭಾಷಾ ಬೆಳವಣಿಗೆಗೆ ಕೊಡುಗೆ ನೀಡಲಾಗುತ್ತಿದೆ ಎಂದರು.

ಸಾಹಿತಿ ನಾಗಶ್ರೀ ತ್ಯಾಗರಾಜ್, ಪ್ರಾಂಶುಪಾಲ ಡಾ. ಕೆಎನ್ ಸುಬ್ರಹ್ಮಣ್ಯ, ಉಪ ಪ್ರಾಂಶುಪಾಲೆ ಡಾ.ಕೆ.ಎಸ್. ಗೀತಾ, ಕಾಲೇಜ್ ಕನ್ನಡ ಸಂಘದ ಅಧ್ಯಕ್ಷ ಎಂ.ವಿ. ವಿಕ್ರಮ್, ರಾಜಲಕ್ಷ್ಮಿ, ಮತ್ತಿತರರು ಉಪಸ್ಥಿತರಿದ್ದರು